# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **1564** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದದಿನಾಂಕ** | **21/03/2025** |
| **ಉತ್ತರಿಸುವ ಸಚಿವರು** | **ಮಾನ್ಯ ಕಾರ್ಮಿಕ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| **ಅ)** | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು; ಹಾಗೂ ರೂಪಿಸಿರುವ ಕಾರ್ಯಕ್ರಮ ಮತ್ತು ಯೋಜನೆಗಳೇನು; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು, 2006 ರ ನಿಯಮ 42 ರಲ್ಲಿ ಗೃಹಭಾಗ್ಯ ಸೌಲಭ್ಯದಡಿ 21 ವರ್ಷ ಮೇಲ್ಪಟ್ಟ ಮತ್ತು 50 ವರ್ಷದೊಳಗಿನ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ರೂ.2.00 ಲಕ್ಷಗಳ ಸಾಲ/ ಮುಂಗಡ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ. |
| **ಆ)** | ಕಾರ್ಮಿಕರು ತಮ್ಮ ಸ್ವಂತ ನಿವೇಶನಗಳಲ್ಲಿ ನಿರ್ಮಿಸುವ ಮನೆಗಳಿಗೆ ಸಹಾಯಧನ ನೀಡುವಂತೆ ಬಹುಕಾಲದಿಂದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| **ಇ)** | ಬಂದಿದ್ದಲ್ಲಿ, ಸದರಿ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮವಹಿಸುವುದೇ? | ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಆಯ್ದಾ ಜಿಲ್ಲೆಗಳಲ್ಲಿ ಗುಂಪು ವಸತಿ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕರ್ನಾಟಕ ನಿಯಮ, 2006 ರ ನಿಯಮ 42 ಕ್ಕೆ ತಿದ್ದುಪಡಿ ತರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

**ಕಾಇ 131 ಎಲ್ ಇಟಿ 2025**

**(ಸಂತೋಷ್ ಎಸ್.ಲಾಡ್)**
**ಕಾರ್ಮಿಕ ಸಚಿವರು**